ಕರ್ನಾಟಕ ಸರ್ಕಾರ

# ಜಿಲ್ಲಾಧಿಕಾರಿಗಳ ಕಾರ್ಯಾಲಯ ಕೊಪ್ಪಳ

ದೂರವಾಣಿ : 08539 – 220844 ಫ್ಯಾಕ್ಸ್ : 221235 ಇ–ಮೇಲ್ : deo.koppal@gmail.com

ಸಂಖ್ಯೆ:ಕಂದಾಯ/ಸಿಬ್ಬಂದಿ/157/2019–20/ಇ–36364

ದಿನಾಂಕ:13/03/2020

## :: ಸೂಚನಾ ಪತ್ರ ::

ವಿಷಯ:– ಕೊಪ್ಪಳ ಜಿಲ್ಲೆಯಲ್ಲಿ ಖಾಲಿ ಇರುವ 21 ಗ್ರಾಮಲೆಕ್ಕಾಧಿಕಾರಿ ಹುದ್ದೆಗಳನ್ನು ನೇರನೇಮಕಾತಿ ಮೂಲಕ ಭರ್ತಿ ಮಾಡುವ ಸಂಬಂಧ 1:10 ಅನುಪಾತದಲ್ಲಿ ತಯಾರಿಸಲಾದ ತಾತ್ಕಾಲಿಕ ದಾಖಲಾತಿ ಪರಿಶೀಲನಾ ಪಟ್ಟಿಯಲ್ಲಿರುವ ಅಭ್ಯರ್ಥಿಗಳು ಮೂಲ ದಾಖಲಾತಿಗಳೊಂದಿಗೆ ಹಾಜರಾಗುವ ದಿನಾಂಕವನ್ನು ಮುಂದೂಡಿದ ಕುರಿತು

ಉಲ್ಲೇಖ:– 1) ಈ ಕಾರ್ಯಾಲಯದ ನೇಮಕಾತಿ ಅಧಿಸೂಚನೆ ಸಮ ಸಂಖ್ಯೆ ದಿನಾಂಕ 24/12/2019

2) ಈ ಕಾರ್ಯಾಲಯದ ಅಧಿಕೃತ ಜ್ಞಾಪನ ಪತ್ರ ಸಮ ಸಂಖ್ಯೆ ದಿನಾಂಕ 05/03/2020

*****

ಕೊಪ್ಪಳ ಜಿಲ್ಲೆ ಕಂದಾಯ ಇಲಾಖೆಯಲ್ಲಿ ಖಾಲಿ ಇರುವ 22 ಗ್ರಾಮಲೆಕ್ಕಾಧಿಕಾರಿ ಹುದ್ದೆಗಳನ್ನು ನೇರನೇಮಕಾತಿ ಮೂಲಕ ಭರ್ತಿ ಮಾಡಲು ಉಲ್ಲೇಖಿತ (1)ರನ್ವಯ ಅಧಿಸೂಚನೆಯನ್ನು ಹೊರಡಿಸಿ ಆನ್‌ಲೈನ್ ಮೂಲಕ ಅರ್ಜಿಗಳನ್ನು ಅಹ್ವಾನಿಸಲಾಗಿರುತ್ತದೆ. ಸ್ವೀಕೃತವಾದ ಅರ್ಜಿಗಳ ಪೈಕಿ 21 ಹುದ್ದೆಗಳಿಗೆ 1:10 ಅನುಪಾತದಲ್ಲಿ ಮೆರಿಟ್ ಕಮ್ ರೋಸ್ಟರ್ ಆಧಾರದ ಮೇಲೆ ಅಭ್ಯರ್ಥಿಗಳ ತಾತ್ಕಾಲಿಕ ದಾಖಲಾತಿ ಪರಿಶೀಲನಾ ಪಟ್ಟಿಯನ್ನು ತಯಾರಿಸಿ ಕೊಪ್ಪಳ ಜಿಲ್ಲಾ ವೆಬ್‌ಸೈಟ್ www.koppal.nic.in ನಲ್ಲಿ ಪ್ರಚುರ ಪಡಿಸಲಾಗಿರುತ್ತದೆ. ಪ್ರಯುಕ್ತ ಸದರಿ ಪಟ್ಟಿಯಲ್ಲಿರುವ ಅಭ್ಯರ್ಥಿಗಳ ಮೂಲ ದಾಖಲಾತಿ ಪರಿಶೀಲನೆಯನ್ನು **ದಿನಾಂಕ:16/03/2020ರಂದು ಬೆಳಿಗ್ಗೆ 11–00 ಗಂಟೆಗೆ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿನ ಆಡಿಟೋರಿಯಂ ಹಾಲ್, ಜಿಲ್ಲಾ ಆಡಳಿತ ಭವನ, ಕೊಪ್ಪಳದಲ್ಲಿ** ಮಾಡಲಾಗುವುದು. ಪ್ರಯುಕ್ತ ಸದರಿ ದಿನಾಂಕದಂದು ಅಭ್ಯರ್ಥಿಗಳಿಗೆ ಹಾಜರಾಗಲು ತಿಳಿಸಲಾಗಿರುತ್ತದೆ.

ಪ್ರಸ್ತುತ ಕರೋನಾ ವೈರಸ್ ಸೊಂಕು ಹರಡುವಿಕೆಯ ಭೀತಿ ಇರುವ ಹಿನ್ನಲೆಯಲ್ಲಿ ಮುಂಜಾಗ್ರತ ಕ್ರಮವಾಗಿ ದಿನಾಂಕ 16/03/2020ರಂದು ಬೆಳಗ್ಗೆ 11–00 ಗಂಟೆಗೆ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿನ ಆಡಿಟೋರಿಯಂ ಹಾಲ್, ಜಿಲ್ಲಾ ಆಡಳಿತ ಭವನ, ಕೊಪ್ಪಳದಲ್ಲಿ ಅಭ್ಯರ್ಥಿಗಳ ಮೂಲ ದಾಖಲಾತಿ ಪರಿಶೀಲನಾ ಮಾಡುವ ಕಾರ್ಯವನ್ನು ಮುಂದೂಡಲಾಗಿದೆ.

ಮುಂದಿನ ದಿನಾಂಕವನ್ನು ತದನಂತರ ಅಭ್ಯರ್ಥಿಗಳಿಗೆ ತಿಳಿಯಪಡಿಸಲಾಗುವುದು.

ಜಿಲ್ಲಾಧಿಕಾರಿಗಳು ಹಾಗೂ ಅಧ್ಯಕ್ಷರು
ಗ್ರಾಮಲೆಕ್ಕಾಧಿಕಾರಿಗಳ ನೇರನೇಮಕಾತಿ ಆಯ್ಕೆ ಪ್ರಾಧಿಕಾರ
ಕೊಪ್ಪಳ ಜಿಲ್ಲೆ ಕೊಪ್ಪಳ

ಗೆ,
**1:10 ತಾತ್ಕಾಲಿಕ ದಾಖಲಾತಿ ಪರಿಶೀಲನಾ ಪಟ್ಟಿಯಲ್ಲಿರುವ ಎಲ್ಲಾ ಅಭ್ಯರ್ಥಿಗಳಿಗೆ**